# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **500** |
| ಮಾನ್ಯ ಸದಸ್ಯರ ಹೆಸರು | ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19.07.2024 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮಂಜೂರಾಗಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ ನಿಲಯಗಳೆಷ್ಟು; (ಜಿಲ್ಲಾವಾರು ವಿದ್ಯಾರ್ಥಿಗಳ ಮಂಜೂರಾತಿ ವಿವರ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 1277 ಮೆಟ್ರಿಕ್ ಪೂರ್ವ ಮತ್ತು 1169 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹೀಗೆ ಒಟ್ಟು 2446 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿನಿಲಯಗಳಲ್ಲಿ 228761 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ.<br>ಜಿಲ್ಲಾವಾರು ವಿವರಗಳನ್ನು ಇಲಾಖೆಯ website https://bcwd.karnataka.gov.in/ ನಲ್ಲಿ ಒದಗಿಸಲಾಗಿದೆ. |
| ಆ) | ಸದರಿ ವಸತಿ ನಿಲಯಗಳನ್ನು ಯಾವಾಗ ಪ್ರಾರಂಭಿಸಲಾಗಿದೆ; ಪ್ರಸ್ತುತ ಸ್ವಂತ ಕಟ್ಟಡದಲ್ಲಿ ನಡೆಸಲಾಗುತ್ತಿದೆಯೇ; ಅಥವಾ ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿದೆಯೇ; ಬಾಡಿಗೆ ಕಟ್ಟಡದಲ್ಲಿ ಅಥವಾ ನಿವೇಶನದಲ್ಲಿ ಇದ್ದರೆ ಕಟ್ಟಡದ ವಿಸ್ತೀರ್ಣ, ಮಹಡಿಗಳು, ಬಾಡಿಗೆ ಹಾಗೂ ಕಟ್ಟಡ ಮಾಲೀಕರ ವಿವರ ನೀಡುವುದು | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಸ್ವಂತ, ಬಾಡಿಗೆ ಮತ್ತು ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಬಾಡಿಗೆ ಕಟ್ಟಡದ ವಿಸ್ತೀರ್ಣ, ಮಹಡಿಗಳ ಹಾಗೂ ಕಟ್ಟಡದ ಮಾಲೀಕರ ವಿವರಗಳನ್ನು ಇಲಾಖೆಯ website https://bcwd.karnataka.gov.in/ ನಲ್ಲಿಒದಗಿಸಲಾಗಿದೆ. |
| ಇ) | ವಸತಿ ನಿಲಯಗಳು ಪ್ರಾರಂಭವಾಗಿ ಹಲವು ವರ್ಷಗಳು ಗತಿಸಿದರೂ ಸ್ವಂತ ಕಟ್ಟಡ ಕಟ್ಟದಿರಲು ಕಾರಣವೇನು; ಇದರಿಂದ ಮೂಲಭೂತ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳು ತೊಂದರೆಗೊಳಗಾಗುವುದಿಲ್ಲವೇ; ಸದರಿ ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ಯಾವಾಗ ನಿರ್ಮಿಸಲಾಗುವುದು; (ವಿವರ ನೀಡುವುದು) | ಬಾಡಿಗೆ/ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣವನ್ನು ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಕೈಗೊಳ್ಳಲಾಗುತ್ತಿದೆ.<br><br>ಈಗಾಗಲೇ ಇಲಾಖೆಯಡಿ ಒಟ್ಟು 1620 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲಾಗಿದೆ. |

| | | |
|---|---|---|
| | | 2024-25ನೇ ಸಾಲಿನ ಆಯವ್ಯಯ ಘೋಷಣೆಯಂತೆ 30 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲು ಕ್ರಮವಹಿಸಲಾಗಿದೆ.<br><br>ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ನಿವೇಶನ ಲಭ್ಯವಿದ್ದ 82 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣವನ್ನು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಪಾಲುದಾರಿಕೆಯೊಂದಿಗೆ ಕೈಗೊಳ್ಳಲು ಕ್ರಮವಹಿಸಲಾಗಿದೆ.<br><br>ನಬಾರ್ಡ್ ಸಂಸ್ಥೆಯ ಆರ್.ಐ.ಡಿ.ಎಫ್-ಟ್ರಾಂಚ್-30 ಯೋಜನೆಯಡಿಯಲ್ಲಿಯೂ 15 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣವನ್ನು ಕೈಗೊಳ್ಳಲು ಕ್ರಮವಹಿಸಲಾಗಿದೆ.<br><br>ಇನ್ನುಳಿದ ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣವನ್ನು ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಮತ್ತು ನಿವೇಶನ ಲಭ್ಯತೆಯನುಸಾರ ಕೈಗೊಳ್ಳಲು ಕ್ರಮವಹಿಸಲಾಗುವುದು. |

**ಸಂಖ್ಯೆ: ಹಿಂವಕ 465 ಬಿಎಂಎಸ್ 2024**

**(ಶಿವರಾಜ್ ಎಸ್ ತಂಗಡಗಿ )**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು